ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ,,
ಕನಕಪುರ

ಸಿ.ಸಿ ನಂ.**46/2014**

| **ಚಾಸಾ ಃ** | **5** | **ಪ್ರಾಸಾಃ-** | **9** |
|---|---|---|---|
| ಹೆಸರು | ಶಿವರಾಜು | | |
| ತಂದೆಯ ಹೆಸರು | ಮರಿಗೌಡ | | |
| ವಯಸ್ಸು | **60** | | |
| ಉದ್ಯೋಗ | ನಿವೃತ್ತ ಜೀವನ | | |
| ವಿಳಾಸ | ಕನಕಪುರ | | |

- - - - - - - - - - - - - - - - - - - - - - - - - - - - - - - - -

**ದಿಃ03.02.2025ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು.**

<u>ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>

ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ ಮತ್ತು ಏನನ್ನು ಜಪ್ತಿಪಡಿಸಿಲ್ಲ. ನನಗೆ ಈಗ ತೋರಿಸಿದ ಒಂದು ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಆ ದಾಖಲೆಯು ಪಂಚನಾಮೆಯಾಗಿದ್ದು, ಅದನ್ನು ಈಗಾಗಲೇ ನಿಪಿ-೨ ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-೨(ಸಿ) ಎಂದು ಗುರುತಿಸಲಾಯಿತು.

ನಿಪಿ-೨ ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ.

<u>ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು</u>

ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರು ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.

ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-

ದಿನಾಂಕ.**03.03.2012** ರಂದು ಬೆಳಿಗ್ಗೆ ಸಮಯದಲ್ಲಿ ಘಟನಾ ಸ್ಥಳದಲ್ಲಿ ಪೋಲೀಸರು ನನ್ನ ಸಮಕ್ಷಮ ನಿಪಿ-**2** ರಂತೆ ಪಂಚನಾಮ ಕ್ರಮ ಜರುಗಿಸಿ ಮೊಬೈಲಿನ ಬಿಡಿಭಾಗಗಳನ್ನು ಅಮಾನತ್ತು ಪಡಿಸಿಕೊಂಡು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ ಃಇಲ್ಲ**

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಡಿಕರೀಸುತ್ತೇನೆ.)**

**ಓ ಹೇ ಕೇ ಸರಿ ಇದೆ,**

**ಮೂರನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ., ಕನಕಪುರ.**